ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 14–11–2019

ಪತ್ರಿಕಾ ಆಮಂತ್ರಣ

1. ಸಂತ ಶ್ರೇಷ್ಠ ಕನಕದಾಸರ ಪ್ರತಿಮೆಗೆ ಪುಷ್ಪಾರ್ಚನೆ ಮತ್ತು ಗೌರವ ಅರ್ಪಣೆ :

ಬಿ. ಎಸ್. ಯಡಿಯೂರಪ್ಪ,
ಮುಖ್ಯಮಂತ್ರಿಗಳು. ಕರ್ನಾಟಕ ಸರ್ಕಾರ

ಗೋವಿಂದ ಎಂ ಕಾರಜೋಳ
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು
ಹಾಗೂ ಇತರೆ ಗಣ್ಯರಿಂದ

ದಿನಾಂಕ : 15–11–2019 ಶುಕ್ರವಾರ ಸಂಜೆ 4–45 ಗಂಟೆಗೆ
ಸ್ಥಳ : ಶಾಸಕರ ಭವನ ಆವರಣ, ಬೆಂಗಳೂರು

2. ಸಂತ ಶ್ರೇಷ್ಠ ಕನಕದಾಸರ ಜಯಂತಿ ಮತ್ತು "ಕನಕ ಶ್ರೀ" ಪ್ರಶಸ್ತಿ ಪ್ರದಾನ ಹಾಗೂ ಕನಕದಾಸರನ್ನು ಕುರಿತ ಪುಸ್ತಕಗಳ ಬಿಡುಗಡೆ ಸಮಾರಂಭ :

ಉದ್ಘಾಟನೆ :

ಬಿ. ಎಸ್. ಯಡಿಯೂರಪ್ಪ,
ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ಮುಖ್ಯ ಅತಿಥಿಗಳು :

ಶ್ರೀ ಗೋವಿಂದ ಎಂ. ಕಾರಜೋಳ,
ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು

ಡಾ: ಸಿ.ಎನ್. ಅಶ್ವತ್ಥ್ ನಾರಾಯಣ್,
ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು

ಶ್ರೀ ಲಕ್ಷ್ಮಣ ಸಂಗಪ್ಪ ಸವದಿ,
ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಮತ್ತು ಕೃಷಿ ಸಚಿವರು

ದಿನಾಂಕ : 15–11–2019 ಶುಕ್ರವಾರ ಸಂಜೆ : 5–00 ಗಂಟೆಗೆ
ಸ್ಥಳ : ರವೀಂದ್ರ ಕಲಾಕ್ಷೇತ್ರ, ಬೆಂಗಳೂರು

3.ರಾಷ್ಟ್ರೀಯ ಪತ್ರಿಕಾ ದಿನಾಚರಣೆ :

ಉದ್ಘಾಟನೆ :

ಡಾ : ಕೆ. ಆರ್. ವೇಣುಗೋಪಾಲ್
ಕುಲಪತಿಗಳು, ಬೆಂಗಳೂರು ವಿಶ್ವವಿದ್ಯಾಲಯ

ಘನ ಉಪಸ್ಥಿತಿ :

ಕ್ಯಾಪ್ಟನ್ ಪಿ. ಮಣಿವಣ್ಣನ್, ಭಾ.ಆ.ಸೇ,
ಸರ್ಕಾರದ ಕಾರ್ಯದರ್ಶಿಗಳು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ
ಅಧ್ಯಕ್ಷರು, ಕರ್ನಾಟಕ ಮಾಧ್ಯಮ ಅಕಾಡೆಮಿ

ಎಸ್. ಎನ್. ಸಿದ್ದರಾಮಪ್ಪ, ಭಾ.ಪೊ. ಸೇ.
ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ದಿನಾಂಕ : 16-11-2019 ಶನಿವಾರ ಬೆಳಿಗ್ಗೆ 10-30 ಗಂಟೆಗೆ
ಸ್ಥಳ : ಪ್ರೊ. ಕೆ. ವೆಂಕಟಗಿರಿಗೌಡ ಸಭಾಂಗಣ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು

3. ಮನೆಯಂಗಳದಲ್ಲಿ ಮಾತುಕತೆ :

ತಿಂಗಳ ಅತಿಥಿ :

ಶ್ರೀ ಚಿಂದೋಡಿ ಶ್ರೀಕಂಠೇಶ್,
ವೃತ್ತಿ ರಂಗಭೂಮಿ ಕಲಾವಿದರು

ದಿನಾಂಕ : 16-11-2019 ಶನಿವಾರ ಸಂಜೆ 4-00 ಗಂಟೆಗೆ
ಸ್ಥಳ : ನಯನ ಸಭಾಂಗಣ, ಕನ್ನಡ ಭವನ, ಜಯಚಾಮರಾಜೇಂದ್ರ ರಸ್ತೆ, ಬೆಂಗಳೂರು

## ಪತ್ರಿಕಾ ಪ್ರಕಟಣೆ

## ನವೆಂಬರ್ 16 ರಂದು ನಗರದಲ್ಲಿ ರಾಷ್ಟ್ರೀಯ ಪತ್ರಿಕಾ ದಿನಾಚರಣೆ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ಸಂವಹನ ಮತ್ತು ಪತ್ರಿಕೋದ್ಯಮ ಹಾಗೂ ವಿದ್ಯುನ್ಮಾನ ಮಾಧ್ಯಮ ವಿಭಾಗದ ಸಹಯೋಗದೊಂದಿಗೆ ಕರ್ನಾಟಕ ಮಾಧ್ಯಮ ಅಕಾಡೆಮಿಯು ನವೆಂಬರ್ 16 ರಂದು ಶನಿವಾರ ಬೆಳಿಗ್ಗೆ 10-30 ಗಂಟೆಗೆ ನಗರದ ಕೆಂಗೇರಿ ಬಳಿ ಇರುವ ಬೆಂಗಳೂರು ವಿಶ್ವವಿದ್ಯಾಲಯದ ಪ್ರೊ. ಕೆ. ವೆಂಕಟಗಿರಿಗೌಡ ಸಭಾಂಗಣದಲ್ಲಿ "ರಾಷ್ಟ್ರೀಯ ಪತ್ರಿಕಾ ದಿನಾಚರಣೆ" ಕಾರ್ಯಕ್ರಮವನ್ನು ಆಯೋಜಿಸಿದೆ.

ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿ ಡಾ ಕೆ. ಆರ್. ವೇಣುಗೋಪಾಲ್ ಅವರು ಉದ್ಘಾಟಿಸಲಿರುವ ಈ ಸಮಾರಂಭದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರೂ ಆಗಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಕ್ಯಾಪ್ಟನ್ ಪಿ. ಮಣಿವಣ್ಣನ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಎಸ್. ಎನ್. ಸಿದ್ದರಾಮಪ್ಪ, ಮುಖ್ಯಮಂತ್ರಿಯವರ ಮಾಧ್ಯಮ ಕಾರ್ಯದರ್ಶಿ ಎನ್. ಭೃಂಗೀಶ್ ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ಬಿ. ಕೆ. ರವಿ ಅವರೂ ಸೇರಿದಂತೆ ಹಲವು ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಹಿರಿಯ ಪತ್ರಕರ್ತೆ ಸಿ. ಜಿ. ಮಂಜುಳಾ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿರುವ ಈ ಕಾರ್ಯಕ್ರಮದಲ್ಲಿ ಕನ್ನಡ ಪ್ರಭ ಮತ್ತು ಸುವರ್ಣ ನ್ಯೂಸ್ 24x7 ಸುದ್ದಿ ವಾಹಿನಿಯ ಪ್ರಧಾನ ಸಂಪಾದಕ ರವಿ ಹೆಗಡೆ ಅವರು ವರದಿಗಾರಿಕೆ : ಮಾಧ್ಯಮಗಳ ಜಗತ್ತಿನೊಳಗೊಂದು ಪಯಣ ಕುರಿತಂತೆ ವಿಶೇಷ ಉಪನ್ಯಾಸ ನೀಡಲಿದ್ದಾರೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಕಾರ್ಯದರ್ಶಿ ಸಿ. ರೂಪಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಸೆಂಬರ್ 2019 ನಿಂದ ಮಾರ್ಚ್ 2020 ವರೆಗೆ ತೀವ್ರತರವಾದ ಇಂದ್ರಧನುಷ್ ಲಸಿಕಾ ಅಭಿಯಾನ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಕೇಂದ್ರ ಸರ್ಕಾರವು ಡಿಸೆಂಬರ್ 2019 ರಿಂದ ಮಾರ್ಚ್ 2020 ರವರೆಗೆ (ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ತುಮಕೂರು, ರಾಮನಗರ, ಮೈಸೂರು, ಮಂಡ್ಯ, ಚಾಮರಾಜನಗರ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಉಡುಪಿ, ಕೊಡಗು, ಹಾಸನ, ಯಾದಗಿರಿ, ರಾಯಚೂರು, ಉತ್ತರ ಕನ್ನಡ, ಧಾರವಾಡ ಮತ್ತು ಬಳ್ಳಾರಿ ಜಿಲ್ಲೆಯ ಹರಪ್ಪನಹಳ್ಳಿ ತಾಲ್ಲೂಕು) ಜಿಲ್ಲೆಗಳಲ್ಲಿ ತೀವ್ರತರವಾದ ಇಂದ್ರಧನುಷ್ ಲಸಿಕಾ ಅಭಿಯಾನವನ್ನು ನಡೆಸಲು ಸೂಚಿಸಿದೆ.

ಮೊದಲನೇ ಸುತ್ತು : 2019 ರ ಡಿಸೆಂಬರ್ 2 ನೇ ತಾರೀಖಿನಿಂದ, ಎರಡನೇ ಸುತ್ತು : 2020 ಜನವರಿ 3 ನೇ ತಾರೀಖಿನಿಂದ, ಮೂರನೇ ಸುತ್ತು : ಫೆಬ್ರವರಿ 3 ನೇ ತಾರೀಖಿನಿಂದ ಹಾಗೂ ನಾಲ್ಕನೇ ಸುತ್ತು ಮಾರ್ಚ್ 2 ತಾರೀಖಿನಿಂದ ಪ್ರಾರಂಭಿಸಲು ಕೇಂದ್ರ ಸರ್ಕಾರ ಸೂಚಿಸಿದೆ. ಈ ಅಭಿಯಾನವನ್ನು ಪ್ರತಿ ತಿಂಗಳು 7 ಕಾರ್ಯದಿನಗಳ ಕಾಲ ನಿಯಮಿತ ಲಸಿಕಾ ದಿನವಾದ ಗುರುವಾರ, ಸಾರ್ವಜನಿಕ ರಜಾದಿನ ಹೊರತುಪಡಿಸಿ ನಡೆಸಲಾಗುವುದು ಎಂದು ಆರೋಗ್ಯ ಇಲಾಖೆ ಪ್ರಕಟಣೆ ತಿಳಿಸಿದೆ.

## ಗ್ರಾಹಕ ಸಂವಾದ ಸಭೆ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಬೆವಿಕಂ ವ್ಯಾಪ್ತಿಗೆ ಒಳಪಡುವ ಎಲ್ಲಾ ಉಪ ವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3:00 ರಿಂದ ಸಂಜೆ 5:30 ರವರಗೆ ಗ್ರಾಹಕ ಸಂವಾದ ಸಭೆಗಳನ್ನು ನಡೆಸಲಾಗುತ್ತಿದೆ. ಸದರಿ ಸಭೆಯಲ್ಲಿ ಗ್ರಾಹಕರು ಪಾಲ್ಗೊಂಡು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ.

ಅದರನ್ವಯ, ಈ ತಿಂಗಳ ಗ್ರಾಹಕ ಸಂವಾದ ಸಭೆ ದಿನಾಂಕ 16.11.2019 ರಂದು ಬೆವಿಕಂನ ಎಲ್ಲಾ ಉಪವಿಭಾಗಗಳಲ್ಲಿ ನಡೆಯಲಿದ್ದು, ಗ್ರಾಹಕರು ಈ ಸಭೆಯ ಸದುಪಯೋಗ ಪಡೆಯಲು ಪ್ರಕಟಣೆ ತಿಳಿಸಿದೆ.

## Customer Interaction Meetings (CIM)

**Bengalulru, November 14 (Karnataka Information)**

**Customer Interaction Meetings (CIM) are being conducted at all Sub Divisions of BESCOM on third Saturday of every month from 3.00pm to 5.30pm. In the said meeting Customers are requested to get their electricity related issues attended and resolved having one to one interaction with concerned BESCOM official**

**In this regard CIM for the month of November is scheduled on 16.11.2019. In this regard all the esteemed consumers are requested to participate and make use of the opportunity in redressal of complaints says official press release.**

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಸಕ್ಕರೆ ಸಚಿವ ಸಿ.ಟಿ. ರವಿ ಅವರು ನವೆಂಬರ್ 15 ರಿಂದ 16 ರವರೆಗೆ ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ನವೆಂಬರ್ 18 ಬೆಳಿಗ್ಗೆ ಕೇಂದ್ರಸ್ಥಾನಕ್ಕ ಹಿಂತಿರುಗುವರು.